**ಪಿ ಅಂಡ್ ಎಸ್‌ಸಿ ಸಂಖ್ಯೆಃ 14/2026 PW.1**

**ಪ್ರಮಾಣ ವಚನ ಬೋಧಿಸಿದ ದಿನಾಂಕಃ 16.07.2026**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

1. ಈ ದಿನ ನನ್ನ ಸಾಕ್ಷಿ ರೂಪದ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು ಅದರಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿರುತ್ತವೆ.

2. ನನ್ನ ತಾತ ಚನ್ನಯ್ಯ @ ಚನ್ನೇಗೌಡ ಇವರು ದಿನಾಂಕ 07.04.2021 ರಂದು ಮಾಡಿಕೊಟ್ಟ ನೊಂದಾಯಿತ ಮೃತ್ಯು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು ಗುರುತಿಸಲಾಯಿತು. ವಂಶವೃಕ್ಷವನ್ನು ನಿಪಿ.2 ಎಂದು ಗುರುತಿಸಲಾಯಿತು. ನನ್ನ ತಾತ ಚನ್ನಯ್ಯ @ ಚನ್ನೇಗೌಡ ಇವರ ಮರಣ ಪ್ರಮಾಣ ಪತ್ರದ ದೃಢೀಕೃತ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ಹಟ್ಟಿ ಗ್ರಾಮದ ಜಮೀನು ಸರ್ವೆ ನಂ 183 ರ ಪಹಣಿ ಪತ್ರಿಕೆಯನ್ನು ನಿಪಿ.4 ಎಂದು ಗುರುತಿಸಲಾಯಿತು. ನನ್ನ ಆಧಾರ್ ಕಾರ್ಡನ್ನು ನಿಪಿ.5 ಎಂದು ಗುರುತಿಸಲಾಯಿತು. ಕಾರಣ ಅರ್ಜಿಯನ್ನು ಮಂಜೂರು ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ಎದುರುದಾರರು ಯಾರು ಹಾಜರಾಗಿರುವುದಿಲ್ಲ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸ. ಇ.

**(ಮಧ್ವೇಶ ಡಬೇರ)**

4 ನೇ ಅಪರ ಜಿಲ್ಲಾ ಮತ್ತು ಸತ್ರ

ನ್ಯಾಯಾಧೀಶರು, ಮಂಡ್ಯ